OS.178/2018 DW-1

**ದಿನಾಂಕಃ 25.07.2026 ರಂದು** ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ.ಬಿ.ಎಂ. ವಕೀಲ ರಿಂದಃ**

ನಾನು ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳನ್ನು ತಿಳಿದುಕೊಂಡು ಸರಿ ಇರುತ್ತದೆ ಎಂದು ಒಪ್ಪಿ- ಸಹಿ ಮಾಡಿರುತ್ತೇನೆ.

**ಪಾಟೀ ಸವಾಲುಃ ವಾದಿ ಪರ ಶ್ರೀ.ಪಿ.ಎಂ.ಆರ್. ವಕೀಲರಿಂದಃ**

ದಾವಾ ಸ್ವತ್ತು ನನ್ನ ತಾಯಿಯಾದ ಪುಟ್ಟಮ್ಮರವರಿಗೆ ಮಂಜೂರಾಗಿರುತ್ತದೆ ಎಂದರೆ ಸರಿ, ಸಾಕ್ಷಿ ಮುಂದುವರೆದು ನಮ್ಮ ಅಕ್ಕ-ತಂಗಿಯರಿಗೆ ಮದುವೆಯಾದ ನಂತರ ಮಂಜೂರಾಗಿರುತ್ತದೆ. ದಾವಾ ಸ್ವತ್ತಿನಲ್ಲಿ ವಾದಿ ಮತ್ತು ಪ್ರತಿವಾದಿಗಳು ಜಂಟಿ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ನಾನು ಅಕ್ಕ-ತಂಗಿಯರಿಗೆ ಮದುವೆ ಮಾಡಿರುವ ಬಗ್ಗೆ ದಾಖಲೆ ನ್ಯಾಯಾಲಯಕ್ಕೆ ಕೊಟ್ಟಿಲ್ಲ. ನಾನು ಬ್ಯಾಂಕಿನಲ್ಲಿ ಸಾಲ ಮಾಡಿರುವ ಬಗ್ಗೆ ದಾಖಲೆ ನ್ಯಾಯಾಲಯಕ್ಕೆ ಕೊಟ್ಟಿಲ್ಲ. ನಾನು ವಾದಿಗಳಿಗೆ ಭಾಗ ಕೊಡಲು ತಪ್ಪಿಸಿಕೊಳ್ಳುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಹಾಕಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಹೆಚ್ಚುವರಿ ಹಿ.ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.
ಶಿರಾ.